# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ :- 10/12/2020 ರಂದು ವಾರ್ಡ್-48ರ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿ**

**ಸಭೆಗೆ ಹಾಜರಿದ್ದ ಅಧಿಕಾರಿಗಳು :-**

1. ಶ್ರೀ. ಪ್ರೇಮಾನಂದ ಕುಮಾರ್. ನೋಡಲ್ ಅಧಿಕಾರಿ.
2. ಶ್ರೀ. ಹೃದಯ ಪಾಟೀಲ್. ಇಂಜನೀಯರ್.
3. ಶ್ರೀ. ವೆಂಕಟೇಶ್. ಹಿರಿಯ ಆರೋಗ್ಯ ಪರೀವಿಕ್ಷಕರು.
4. ಶ್ರೀ. ರಾಹುಲ್ ಕಿರಿಯ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ.
5. ಶ್ರೀ. ಮಹೇಶ್ ಕುಮಾರ್ ಬೀದಿ ದೀಪ ನಿರ್ವಹಣೆ.
6. ಶ್ರೀ. ಮುರಳಿ ಕಂದಾಯ ಪರೀವಿಕ್ಷಕರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯ ಕಾರ್ಯದರ್ಶಿರವರು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್ ಸಮಿತಿ ಸಭೆಯನ್ನು ಕಂದಾಯ ಕಛೇರಿಯಲ್ಲಿ ನಡೆಸಲಾಯಿತು. ನೋಡಲ್ ಅಧಿಕಾರಿ ರವರು ವಾರ್ಡಿನ ಸಾರ್ವಜನಿಕರ ಕುಂದು ಕೊರತೆಗಳು ಸಮಿತಿ ಸಭೆಯ ಸದಸ್ಯರುಗಳೊಂದಿಗೆ ಹಾಗೂ ಅಧಿಕಾರಿಗಳ ಜೊತೆಯಲ್ಲಿ ಚರ್ಚಿಸಿದರು ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ಈ ಕೆಳಕಂಡಂತೆ ತಿಳಿಸಲಾಗಿರುತ್ತದೆ.

> **ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ಶಿಘ್ರದಲ್ಲಿ ಪೂರ್ಣಗೊಳಿಸಲು ವಾರ್ಡ್ ಇಂಜನಿಯರ್‌ರವರಿಗೆ ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಟ್ರೈಲರಿಂಗ್ ತರಬೇತಿ ನೀಡಲು ಸೂಕ್ತವಾದ ಸ್ಥಳ ಗುರುತಿಸಿಕೊಡಲು ವಾರ್ಡ್ ಇಂಜನಿಯರ್‌ರವರಿಗೆ ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚಲು ಕೂಡಲೆ ಕ್ರಮ ವಹಿಸಲು ಸೂಚಿಸಿದರು.
4. ವಾರ್ಡ್ ವ್ಯಾಪ್ತಿಯಲ್ಲಿ ಮಹಮದ್ ಅಲಿ ರಸ್ತೆ ಬದಿಯ ಮೋರಿಯನ್ನು ಸ್ವಚ್ಛಗೋಳಿಸಲು ಸೂಚಿಸಿದರು.
5. ವಾರ್ಡ್ ವ್ಯಾಪ್ತಿಯ ಡಿ.ಜೆ.ಹಳ್ಳಿ ಮಾರ್ಕೆಟ್ ಫೂಟ್ಪಾತ್‌ಗಳನ್ನು ಒತ್ತುವರಿ ಮಾಡಿಕೊಂಡು ವ್ಯಾಪಾರ ಮಾಡುವವರನ್ನು ಕೂಡಲೆ ತೇರೆವುಗೋಳಿಸಲು ಸೂಚಿಸಿದರು.
6. ಕಂದಾಯ ಕಛೇರಿಯನ್ನು ಘನತ್ಯಾಜ್ಯ ಇಲಾಖೆಯವರಿಗೆ ಹಸ್ತಾಂತರಿಸಲು ಹಾಗೂ ಕಂದಾಯ ಕಛೇರಿಯನು ನೂತನವಾಗಿ ನಿರ್ಮಿಸಿರುವ ವಾರ್ಡ್ ಕಛೇರಿಯಲ್ಲಿ ಕಾರ್ಯನಿರ್ವಹಿಸಲು ಸೂಚಿಸಿದರು.

Scanned with CamScanner

ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು

> **ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ ಶಾಂಪುರ ಮುಖ್ಯ ರಸ್ತೆಯಿಂದ ಚರ್ಮದ ಮಂಡಿಗೆ ಪೂರೈಸುವ ನೀರಿನ ಲೈನ್ ಕಲುಷಿತಗೊಂಡಿದ್ದು ಕೂಡಲೆ ಪರಿಹರಿಸಬೇಕಾಗಿ ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಇಂದಿರಾ ಕ್ಯಾಂಟಿನ್ ಹತ್ತಿರವಿರುವ ಕೊಳವೆ ಬಾವಿಯನ್ನು ರಿಪೇರಿ ಮಾಡಲು ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ನಿರ್ವಹಿಸಿರುವ ಕಾಮಗಾರಿಗಳಿಗೆ ರೆಸ್ಟೋರೆಷನ್ ಮಾಡಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳನ್ನು ಕೂಡಲೆ ಪರಿಹರಿಸುವಂತೆ ಕಿರಿಯ ಅಭಿಯಂತರರಿಗೆ ಸೂಚಿಸಲಾಯಿತು.

> **ಸ್ಟ್ರೀಟ್ ಲೈಟ್ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿನ ಸ್ಟ್ರೀಟ್‌ಲೈಟ್‌ಗಳು ಕೆಟ್ಟು ಹೋಗಿದ್ದು ರಿಪೇರಿ ಮಾಡಲು ಸೂಚಿಸಿದರು.

ಕ್ರಮ : ಸಹಾಯಕ ಅಭಿಯಂತರರು (ಎಲೆಕ್ಟ್ರಿಕಲ್ ಮೆಯೋಹಾಲ್) ರವರಿಗೆ ಸೂಕ್ತ ಕ್ರಮವಹಿಸಲು ಈ ಸಭೆ ಮುಖಾಂತರ ಸೂಚಿಸಲಾಯಿತು.

> **ಕಂದಾಯ ಇಲಾಖೆಗೆ ಸಂಬಂಧಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ವಸೂಲಾತಿ 3.29 ಕೋಟಿ ಬೇಡಿಕೆ ಇದ್ದು ಹಾಗೂ ಪಾವತಿ 75.00 ಲಕ್ಷಗಳು ಮಾತ್ರ ವಸೂಲಿಯಾಗಿದ್ದು ಬಾಕಿ ಕಂದಾಯ ಬೇಡಿಕೆ ಕೂಡಲೆ ಪೂರೈಸಲು ಕಂದಾಯ ಪರಿವೀಕ್ಷಕರಿಗೆ ಸೂಚಿಸಿದರು.

ಕ್ರಮ : ಕಂದಾಯ ಅಧಿಕಾರಿಗಳು ಈ ಮೇಲೆ ಸೂಚಿಸಿರುವ ಸಮಸ್ಯೆಗೆ ಸಕಾರಾತ್ಮಕ ಪ್ರತಿಕ್ರಿಯೆ ನೀಡಿದರು.

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

**ಸದಸ್ಯ ಕಾರ್ಯದರ್ಶಿ –48** | **ನೋಡಲ್ ಅಧಿಕಾರಿ ವಾರ್ಡ್ –48**

**ಪ್ರತಿಗಳನ್ನು:**

1. ಮಾನ್ಯ ಆಡಳಿತಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ವಲಯ ಆಯುಕ್ತರು ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ
4. ಮುಖ್ಯ ಅಭಿಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.

Scanned with CamScanner

5. ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.

6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ-ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.

7. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.

8. ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.

9. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.

10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.

11. ಸಹಾಯಕ ಕಾರ್ಯಪಾಲಕ ಅಭಿಯಂತರರು (ಸ್ಟ್ರೀಟ್ ಲೈಟ್) ರವರ ಮಾಹಿತಿಗಾಗಿ ಸಲ್ಲಿಸಿದೆ.

12. ಕಛೇರಿ ಪ್ರತಿ.

Scanned with CamScanner